## ಹಾಸನ ಜಿಲ್ಲಾ, ಜಿಲ್ಲಾ ದಂಡಾಧಿಕಾರಿಗಳ ಕಛೇರಿಯ ನಡವಳಿಕೆಗಳು.

ವಿಷಯ:- ಚನ್ನರಾಯಪಟ್ಟಣ ತಾಲ್ಲೂಕು, ಶ್ರೀನಿವಾಸಪುರ ಹೇಮಾವತಿ ಸಕ್ಕರೆ ಕಾರ್ಖಾನೆಗೆ ನಿರ್ದೇಶಕರುಗಳ ಚುನಾವಣೆಗೆ ಸಂಬಂಧ ಸೆಕ್ಷನ್ 144 ದಂಡ ಪ್ರಕ್ರಿಯಾ ಸಂಹಿತೆ ರೀತ್ಯಾ ಪ್ರತಿಬಂಧಕಾಜ್ಞೆ ಹಾಗೂ ಮದ್ಯ ಶೇಖರಣೆ ಸಾಗಾಣಿಕೆ ಮತ್ತು ಮಾರಾಟವನ್ನು ನಿಷೇಧಿಸುವ ಬಗ್ಗೆ.

ಉಲ್ಲೇಖ:- ಆರಕ್ಷಕ ಅಧೀಕ್ಷಕರು, ಹಾಸನ ರವರ ವರದಿ ಡಿಎಸ್‌ಬಿ.ಚು.53:95 ದಿನಾಂಕ 3-11-95

---

**ಪ್ರಸ್ತಾವನೆ:**

ಚನ್ನರಾಯಪಟ್ಟಣ ತಾಲ್ಲೂಕು, ಶ್ರೀನಿವಾಸಪುರ ಸಕ್ಕರೆ ಕಾರ್ಖಾನೆಗೆ ನಿರ್ದೇಶಕರುಗಳ ಚುನಾವಣೆ ಸಂಬಂಧ ನಾಮಪತ್ರ ಪರಿಶೀಲನೆಯ ಸಮಯದಲ್ಲಿ 9-10-95ರಂದು ಗಲಾಟೆ ನಡೆದಿದ್ದು, ಈ ಗಲಾಟೆ ಪ್ರಯುಕ್ತ ಚುನಾವಣೆಯನ್ನು ಮುಂದೂಡಿದ್ದು, ದಿನಾಂಕ 5-11-95ರಂದು ಚುನಾವಣೆ ನಡೆಯಲಿದೆ. ಈ ಸಂದರ್ಭದಲ್ಲಿ ಸಕ್ಕರೆ ಕಾರ್ಖಾನೆಯ ಅಕ್ಕ ಪಕ್ಕದ ಹಳ್ಳಿಗಳಲ್ಲಿ ಗಲಭೆಗಳಾಗುವ ಸಂಭವಗಳು ಇರುವುದರಿಂದ ದಿನಾಂಕ 5-11-95ರಂದು ಹೇಮಾವತಿ ಸಕ್ಕರೆ ಕಾರ್ಖಾನೆ ಮತ್ತು ಅದರ ಸುತ್ತಮುತ್ತ ಒಂದು ಕಿ.ಮೀ. ವ್ಯಾಪ್ತಿಯಲ್ಲಿ ಬರುವ ಎಲ್ಲಾ ಹಳ್ಳಿಗಳಲ್ಲಿಯೂ ಮುಂಜಾಗ್ರತಾ ಕ್ರಮವಾಗಿ ದಂಡ ಪ್ರಕ್ರಿಯಾ ಸಂಹಿತೆ ಸೆಕ್ಷನ್ 144ನೇ ರೀತ್ಯಾ ಪ್ರತಿಬಂಧಕಾಜ್ಞೆಯನ್ನು ಹೊರಡಿಸುವಂತೆ ಹಾಗೂ ಹೇಮಾವತಿ ಸಕ್ಕರೆ ಕಾರ್ಖಾನೆಯ ಸುತ್ತ 3 ಕಿ.ಮೀ. ವ್ಯಾಪ್ತಿಯಲ್ಲಿ ಬರುವ ಎಲ್ಲಾ ಹಳ್ಳಿಗಳಲ್ಲಿಯೂ ಮುಂಜಾಗರೂಕತಾ ಕ್ರಮವಾಗಿ ಮದ್ಯಪಾನ ಮಾರಾಟವನ್ನು ನಿಷೇಧಿಸಿ ಆಜ್ಞೆ ಹೊರಡಿಸುವಂತೆ ಹಾಸನ ಆರಕ್ಷಕ ಅಧೀಕ್ಷಕರವರು ಉಲ್ಲೇಖಿತ ಪತ್ರದಲ್ಲಿ ಕೋರಿರುತ್ತಾರೆ. ಮೇಲ್ಕಂಡ ಕಾರಣಗಳಿಂದ ಶ್ರೀನಿವಾಸಪುರದ ಹೇಮಾವತಿ ಕಾರ್ಖಾನೆಯ ಸುತ್ತ 1 ಕಿ.ಮೀ ವ್ಯಾಪ್ತಿಯಲ್ಲಿ ದಂಡ ಪ್ರಕ್ರಿಯಾ ಸಂಹಿತೆ ಸೆಕ್ಷನ್ 144ನೇ ರೀತ್ಯಾ ಪ್ರತಿಬಂಧಕಾಜ್ಞೆಯನ್ನು ಹಾಗೂ ಸದರೀ ಕಾರ್ಖಾನೆಯ ಸುತ್ತ 3 ಕಿ.ಮೀ' ವ್ಯಾಪ್ತಿಯಲ್ಲಿ ಮದ್ಯ ಶೇಖರಣೆ ಸಾಗಾಣಿಕೆ ಮತ್ತು ಮಾರಾಟವನ್ನು ನಿಷೇಧಿಸಲು ಅಗತ್ಯವಿರುತ್ತದೆಂದು ಹಾಸನ ಜಿಲ್ಲಾ ದಂಡಾಧಿಕಾರಿಗಳವರಿಗೆ ಮನವರಿಕೆಯಾಗಿದೆ. ಆದುದರಿಂದ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಆದೇಶ ಸಂಖ್ಯೆ ಎಂ.ಎ.ಜಿ 420:95-96 ದಿನಾಂಕ 3-11-1995.**

ದಂಡ ಪ್ರಕ್ರಿಯಾ ಸಂಹಿತೆ ಸೆಕ್ಷನ್ 144ನೇ ರೀತ್ಯಾ ಹಾಗೂ ಕರ್ನಾಟಕ ಅಬಕಾರಿ ಕಾಯಿದೆ 1965 ಸೆಕ್ಷನ 21ರಲ್ಲಿ ದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ಮಹೇಂದ್ರು ಜೈನ್, ಭಾ.ಆ.ಸೇ. ಜಿಲ್ಲಾ ದಂಡಾಧಿಕಾರಿ, ಹಾಸನ ಜಿಲ್ಲೆ, ಹಾಸನ ಆದ ನಾನು ಚನ್ನರಾಯಪಟ್ಟಣ ತಾಲ್ಲೂಕು ಶ್ರೀನಿವಾಸಪುರದ ಹೇಮಾವತಿ ಸಕ್ಕರೆ ಕಾರ್ಖಾನೆ ಸುತ್ತ 1 ಕಿ.ಮೀ. ವ್ಯಾಪ್ತಿಯೊಳಗೆ ಬರುವ ಎಲ್ಲಾ ಪ್ರದೇಶಗಳಲ್ಲಿ ಮುಂಜಾಗರೂಕತಾ ಕ್ರಮವಾಗಿ ದಿನಾಂಕ 5-11-95ರ ಬೆಳಿಗ್ಗೆ 1-00 ಗಂಟೆಯಿಂದ ರಾತ್ರಿ 12-00 ಗಂಟೆ ವರೆಗೆ ದಂಡ ಪ್ರಕ್ರಿಯಾ ಸಂಹಿತೆ ಸೆಕ್ಷನ್ 144ನೇ ರೀತ್ಯಾ ಪ್ರತಿಬಂಧಕಾಜ್ಞೆಯನ್ನು ಹೊರಡಿಸಿದೆ. ಈ ನಿಷೇಧಾಜ್ಞೆಯ ಸಮಯದಲ್ಲಿ 5 ಅದಕ್ಕಿಂತ ಹೆಚ್ಚು ಜನ ಗುಂಪು ಸೇರುವುದು ಅಪಾಯಕಾರಿ ಆಯುಧಗಳನ್ನು ಹಿಡಿದು ತಿರುಗಾಡುವುದು, ಸಭೆ ಸಮಾರಂಭ ಮೆರವಣಿಗೆ ನಡೆಸುವುದು, ಘೋಷಣೆಗಳನ್ನು ಕೂಗುವುದು, ಯಾವುದೇ ಸ್ಫೋಟಕ ವಸ್ತುಗಳನ್ನು ಹಿಡಿಯುವುದು ಹಾಗೂ ಸಾರ್ವಜನಿಕರ ಶಾಂತಿ ಭಂಗ ತರುವ ಸನ್ನಿವೇಶ, ಇನ್ನಿತರೇ ಯಾವುದೇ ಕ್ರಮ ಚಟುವಟಿಕೆಗಳನ್ನು ಕೈಗೊಳ್ಳುವುದನ್ನು ನಿಷೇಧಿಸಿರುತ್ತೇನೆ. ಅಲ್ಲದೆ ಹೇಮಾವತಿ ಸಕ್ಕರೆ ಕಾರ್ಖಾನೆಯ ಸುತ್ತ 3 ಕಿ.ಮೀ ವ್ಯಾಪ್ತಿಯ ಪ್ರದೇಶದಲ್ಲಿ ಮದ್ಯ ಶೇಖರಣೆ, ಸಾಗಾಣಿಕೆ ಮತ್ತು ಮಾರಾಟ ಮಾಡುವುದನ್ನು ದಿನಾಂಕ 4-11-95ರ ಬೆಳಿಗ್ಗೆ 6-00 ಗಂಟೆಯಿಂದ 6-11-95ರ ರಾತ್ರಿ 12-00 ಗಂಟೆಯವರೆಗೆ ನಿಷೇಧಿಸಿರುತ್ತೇನೆ.